ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1263 (1281)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ರಾಜ್ಯದಲ್ಲಿ ಪೌತಿ ಖಾತೆ ಆಂದೋಲನವನ್ನು ನಡೆಸುವ ಬಗ್ಗೆ

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಲ್ಲಿ ಪೌತಿ ಖಾತೆ ಆಂದೋಲನವನ್ನು ನಡೆಸಲಾಗಿದೆಯೇ ; ಹಾಗಿದ್ದಲ್ಲಿ ಯಾವಾಗ ನಡೆಸಲಾಯಿತು ಇದರ ಫಲಶ್ರುತಿ ಏನು ಹಾಗೂ ಇದನ್ನು ಪ್ರತಿ ವರ್ಷಕ್ಕೊಮ್ಮೆ ಖಡ್ಡಾಯವಾಗಿ ನಡೆಸಲು ಸರ್ಕಾರದ ತೀರ್ಮಾನಗಳೇನು ; (ವಿವರ ನೀಡುವುದು)

(ಆ) ಈ ಪೌತಿ ಖಾತೆ ಆಂದೋಲನದಲ್ಲಿ ಕೊಡಗು ಜಿಲ್ಲೆಯಲ್ಲಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಇದರಲ್ಲಿ ವಿಲೇಯಾದ ಅರ್ಜಿಗಳ ಸಂಖ್ಯೆ ಉಳಿಕೆ ಅರ್ಜಿಗಳ ಸಂಖ್ಯೆ ಉಳಿಯಲು ಕಾರಣವೇನು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಪೌತಿ ಖಾತೆ ಆಂದೋಲನದ ಬಗ್ಗೆ ವ್ಯಾಪಕ ಪ್ರಚಾರವನ್ನು ನೀಡಲು ತೆಗೆದುಕೊಂಡ ಕ್ರಮಗಳೇನು ?